**ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘ (ರಿ.), ಬೆಂಗಳೂರು – 560 023.**

## ದಿನಾಂಕ: 26–01–2024 ರಂದು ಆಚರಿಸಿದ

# ಗಣರಾಜ್ಯೋತ್ಸವದ

# ಸಚಿತ್ರಗಳ ಪಕ್ಷಿ ನೋಟ

ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘವು ಭಾರತದ ಗಣರಾಜ್ಯೋತ್ಸವ ಕಾರ್ಯಕ್ರಮವನ್ನು ದಿನಾಂಕ: 26–01–2024 ರಂದು ಶುಕ್ರವಾರದ ಬೆಳಿಗ್ಗೆ 09–00 ಗಂಟೆಯಿಂದ ಸಂಘದ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಸಂಘದ ಆವರಣದಲ್ಲಿರುವ ಧ್ವಜ ಸ್ಥಂಭದ ಬಳಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಮತ್ತು ಸಂವಿಧಾನ ಶಿಲ್ಪಿ ಡಾ|| ಬಿ. ಆರ್. ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು.






















**ಶ್ರೀಯುತ ಕೆ. ಬಿ. ಬೆಟ್ಟೇಗೌಡ,** ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘ, ಬೆಂಗಳೂರು ಹಾಗೂ ಸಂಘದ ಪದಾಧಿಕಾರಿಗಳು ಮತ್ತು ಹಿರಿಯ ಸದಸ್ಯರೊಡಗೂಡಿ ಧ್ವಜಾರೋಹಣವನ್ನು ನೆರವೇರಿಸಿದರು.





ಗಣರಾಜ್ಯೋತ್ಸವದ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಹಾಜರಿದ್ದವರೆಲ್ಲರೂ ರಾಷ್ಟ್ರ ಧ್ವಜಕ್ಕೆ ವಂದನೆ ಸಲ್ಲಿಸಿದರು. ಧ್ವಜ ವಂದನೆ ಜೊತೆಗೆ ರಾಷ್ಟ್ರಗೀತೆಯನ್ನು ನುಡಿಸಿ, ಹಾಡಲಾಯಿತು.



ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಕಾರ್ಯದರ್ಶಿಯವರಾದ ಶ್ರೀಯುತ ಎಮ್. ಶಂಕರಪ್ಪ ನವರು ಗಣರಾಜ್ಯೋತ್ಸವದ ಧ್ವಜಾರೋಹಣ ಕಾರ್ಯಕ್ರಮಕ್ಕೆ ಆಗಮಿಸಿದ್ದವರಲ್ಲರನ್ನೂ ಹೃತ್ಪೂರ್ವಕವಾಗಿ ಸ್ವಾಗತಿಸಿ ಗಣರಾಜ್ಯೋತ್ಸವದ ಬಗ್ಗೆ ಪ್ರಾಸ್ತಾವಿಕ ನುಡಿಗಳನ್ನಾಡಿದರು.









ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಕಾರ್ಯಕಾರೀ ಸಮಿತಿಯ ಸದಸ್ಯರಾದ ಶ್ರೀಯುತ ಎಂ. ಎಸ್. ಮಂಜೇಗೌಡ ರವರು ತಮ್ಮ ಸ್ವರಚಿತ “ಮಿಂಚು” ಎಂಬ ದೇಶ ಭಕ್ತಿ ಕವನವನ್ನು ವಾಚಿಸಿದರು.





ಹಿರಿಯ ಸದಸ್ಯರಾದ ಶ್ರೀಯುತ ಹೆಚ್. ಟಿ. ಕೃಷ್ಣಪ್ಪನವರು ಗಣರಾಜ್ಯೋತ್ಸವದ ಧ್ವಜಾರೋಹಣ ಕಾರ್ಯಕ್ರಮದಲ್ಲಿ ತಮ್ಮ ಚುಟುಕಾದ ಭಾಷಣ ಮಾಡಿದರು.







ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಉಪಾಧ್ಯಕ್ಷರಾದ ಶ್ರೀಯುತ ಎಮ್. ವಿ. ಶೇಷನ್ ರವರು ತಮ್ಮ ನಿರರ್ಗಳ ಆಂಗ್ಲ ಮಿಶ್ರಿತ ಕನ್ನಡದಲ್ಲಿ ಗಣರಾಜ್ಯದ ಮಹತ್ವದ ಬಗ್ಗೆ ಮಾತನಾಡಿದರು.



ತದನಂತರ ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಶ್ರೀಯುತ ಕೆ. ಬಿ. ಬೆಟ್ಟೇಗೌಡ ರವರು ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ಗಣರಾಜ್ಯದ ಪ್ರಾಮುಖ್ಯತೆ ಬಗ್ಗೆ ಹೇಳಿ ಸಮತೋಲನಕರ ಭಾಷಣವನ್ನು ಮಾಡಿದರು.













ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಜಂಟಿ ಕಾರ್ಯದರ್ಶಿಯಾದ ಶ್ರೀಯುತ ಬಿ. ಎನ್. ಶಾಮಣ್ಣ ರವರು ಗಣರಾಜ್ಯೋತ್ಸವದ ಧ್ವಜಾರೋಹಣ ಕಾರ್ಯಕ್ರಮಕ್ಕೆ ಆಗಮಿಸಿದ್ದವರೆಲ್ಲರಿಗೂ ಹೃತ್ಪೂರ್ವಕವಾದ ಧನ್ಯವಾದ ಸಲ್ಲಿಸಿದರು.



ಹಿರಿಯ ಸದಸ್ಯರೂ ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಗಣರಾಜ್ಯೋತ್ಸವದ ಧ್ವಜಾರೋಹಣ ಕಾರ್ಯಕ್ರಮಕ್ಕೆ ಹಾಜರಾಗಿ ತಮ್ಮ ದೇಶ ಭಕ್ತಿಯನ್ನು ಮೆರೆದರು.

























ಸಂಘದ ವತಿಯಿಂದ ಕಾರ್ಯಕ್ರಮಕ್ಕೆ ಆಗಮಿಸಿದ್ದ ಎಲ್ಲರಿಗೂ ಲಘು ಉಪಹಾರ ವ್ಯವಸ್ಥೆ ಮಾಡಲಾಗಿತ್ತು.









**ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಉಪಾಧ್ಯಕ್ಷರಾದ ಶ್ರೀಯುತ ಜಿ. ಸಿ. ಮಂಜುನಾಥ್ ರವರು ಗಣರಾಜ್ಯೋತ್ಸವದ ಧ್ವಜಾರೋಹಣ ಕಾರ್ಯಕ್ರಮದಲ್ಲಿ ತಮ್ಮ ನಿರರ್ಗಳ ಮಾತಿನ ಧಾಟಿಯಲ್ಲಿ ಇಡೀ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರೂಪಿಸಿದರು.**





**ಸಂಘವು ಆಯೋಜಿಸಿದ್ದ ಸರಳ ಸಮಾರಂಭಕ್ಕೆ ಹಿರಿಯ/ಕಿರಿಯ ಸದಸ್ಯರೂ ಸೇರಿದಂತೆ ಹೆಚ್ಚು ಮಂದಿ ಹಾಜರಿದ್ದು ಸಮಾರಂಭದ ಸಂಭ್ರಮಕ್ಕೆ ಶೋಭೆ ತಂದು ಯಶಸ್ವಿಯಾಗಲು ಸಹಕರಿಸಿದರು.**

**ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಎಲ್ಲರಿಗೂ ವ್ಯವಸ್ಥೆ ಮಾಡಲಾಗಿದ್ದ ಲಘು ಉಪಹಾರದೊಂದಿಗೆ ಕಾರ್ಯಕ್ರಮ ಸಂಪನ್ನ ವಾಗಿರುತ್ತದೆ.**

**ಕರ್ನಾಟಕ ರಾಜ್ಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘ, ಬೆಂಗಳೂರು – 560 023.**

* * * * *